ಕರ್ನಾಟಕ ಸರ್ಕಾರ

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ(ಇತರೆ ಪರೀಕ್ಷೆಗಳು), ಮಲ್ಲೇಶ್ವರಂ

6ನೇ ಅಡ್ಡರಸ್ತೆ, ಬೆಂಗಳೂರು-560003

ಸಂಖ್ಯೆ: ವಿ1/ವಿ.ಸ.ಪ/ಮೇ-2019-20 ದಿನಾಂಕ:02.08.2019

-: ಸುತ್ತೋಲೆ :-

ವಿಷಯ: ಮೇ/ಜೂನ್-2019ರ ಮಾಹೆಯಲ್ಲಿ ನಡೆದ ವಿಶೇಷ ಸಂಗೀತ, ನೃತ್ಯ ಮತ್ತು ತಾಳವಾದ್ಯ ಪರೀಕ್ಷೆಯ ಫಲಿತಾಂಶ ಪ್ರಕಟಣೆ ಕುರಿತು.

*******

ಮೇ-2019ರ ಮಾಹೆಯಲ್ಲಿ ನಡೆದ ವಿಶೇಷ ಸಂಗೀತ, ನೃತ್ಯ ಮತ್ತು ತಾಳವಾದ್ಯ ಪರೀಕ್ಷೆಯ ಫಲಿತಾಂಶವನ್ನು ಮಂಡಳಿಯ ವೆಬ್ ಸೈಟ್‌ನಲ್ಲಿ (www.kseeb.kar.nic.in) ನಲ್ಲಿ ದಿನಾಂಕ:05.08.2019ರಂದು ಬೆಳಿಗ್ಗೆ 12.00 ಗಂಟೆಗೆ ಪ್ರಕಟಿಸಲಾಗುವುದು. ಫಲಿತಾಂಶ ಪಟ್ಟಿಯನ್ನು ಈ ಪತ್ರದೊಂದಿಗೆ ಕಳುಹಿಸಲಾಗಿದೆ. ಸಂಬಂಧಿಸಿದ ಕೇಂದ್ರಗಳ ಮುಖ್ಯ ಅಧೀಕ್ಷಕರು/ಶಾಲಾ ಮುಖ್ಯ ಶಿಕ್ಷಕರು ಸೂಚನಾ ಫಲಕದಲ್ಲಿ ದಿನಾಂಕ:06.08.2019ರಂದು ಫಲಿತಾಂಶ ಪ್ರಕಟಿಸಲು ತಿಳಿಸಿದೆ. ಫಲಿತಾಂಶ ಪ್ರಕಟಣೆಯಾದ 15 ದಿನಗಳೊಳಗೆ ಫಲಿತಾಂಶ ತಿದ್ದುಪಡಿ ಇದ್ದಲ್ಲಿ ನಿಯಮಾನುಸಾರ ತಿದ್ದುಪಡಿ ಮಾಡಲಾಗುವುದು. ಸದರಿ ಫಲಿತಾಂಶವು ಪರೀಕ್ಷೆಯಲ್ಲಿ ದುರಾಚರಣೆ, ವಂಚನೆ, ಅನುಚಿತ ವರ್ತನೆ, ನಕಲು ಮಾಡಿರುವುದು ಮೊದಲಾದವುಗಳಿಂದ ಪ್ರಭಾವಿತವಾಗಿದೆ ಎಂದು ಕಂಡುಬಂದಲ್ಲಿ ಅಂತಹ ಫಲಿತಾಂಶವನ್ನು ಫಲಿತಾಂಶ ಪ್ರಕಟವಾದ ನಂತರವೂ ನಿಯಮಾನುಸಾರ ತಡೆಹಿಡಿಯುವ, ರದ್ದುಪಡಿಸುವ, ಮಾರ್ಪಡಿಸಿ ಪ್ರಕಟಿಸುವ ಅಧಿಕಾರವನ್ನು ಮಂಡಳಿ ಹೊಂದಿರುತ್ತದೆ.

**ಮೇ-2019ರ ಮಾಹೆಯಲ್ಲಿ ನಡೆದ ವಿಶೇಷ ಸಂಗೀತ, ನೃತ್ಯ ಮತ್ತು ತಾಳವಾದ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಹಾಗೂ ಮರುಮೌಲ್ಯಮಾಪನಕ್ಕಾಗಿ ನಿಗಧಿತ ಅರ್ಜಿ ಸಲ್ಲಿಸುವ ವೇಳಾಪಟ್ಟಿ ಈ ಕೆಳಕಂಡಂತಿದೆ.**

| ವಿವರ | ದಿನಾಂಕ |
|---|---|
| ಪ್ರಾಯೋಗಿಕ ಪರೀಕ್ಷೆಯ ಅಂಕಗಳ ಮರು ಎಣಿಕೆ ಮತ್ತು ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | 06.08.2019 |
| ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಶುಲ್ಕ ಪಾವತಿಸಿದ ಬ್ಯಾಂಕ್ ಚಲನ್‌ನೊಂದಿಗೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 14.08.2019 |
| ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಶುಲ್ಕ ಪಾವತಿಸಿದ ಬ್ಯಾಂಕ್ ಚಲನ್‌ನೊಂದಿಗೆ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | 08.08.2019 |
| ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 27.08.2019 |

**ಮರುಎಣಿಕೆ ಬಯಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ ವಿಷಯದ ಉತ್ತರ ಪತ್ರಿಕೆಯ ಛಾಯಾಪ್ರತಿಯನ್ನು ಪಡೆಯಬೇಕಾಗಿರುತ್ತದೆ. ನೇರವಾಗಿ ಮರುಎಣಿಕೆಗಾಗಿ ಅರ್ಜಿ ಸಲ್ಲಿಸುವಂತಿಲ್ಲ .ಛಾಯಾಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಸದರಿ ಛಾಯಾಪ್ರತಿಯೊಂದಿಗೆ ಮಂಡಳಿಗೆ ಪತ್ರ ಬರೆದು ಸರಿಪಡಿಸಿಕೊಳ್ಳಬಹುದಾಗಿರುತ್ತದೆ. ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಪರಿಶೀಲಿಸಿ ಮಂಡಳಿಯ ವೆಚ್ಚದಲ್ಲಿ ಪರಿಷ್ಕೃತ ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಕೇಂದ್ರಗಳ ಪರೀಕ್ಷಕರಿಗೆ ಈ ಬಗ್ಗೆ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ರವಾನಿಸಲಾಗುವುದು.**

ಉತ್ತೀರ್ಣ ಅಥವಾ ಅನುತ್ತೀರ್ಣ ವಿದ್ಯಾರ್ಥಿಗಳು ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಬಯಸಿದಲ್ಲಿ ನಿಗಧಿತ ಅರ್ಜಿ ನಮೂನೆಯಲ್ಲಿ ವಿವರಗಳನ್ನು ಭರ್ತಿ ಮಾಡಿ ನಿಗಧಿಪಡಿಸಿದ ಶುಲ್ಕವನ್ನು (ನಿರ್ದೇಶಕರು(ಇತರೆ ಪರೀಕ್ಷೆಗಳು)

ಇವರ ಹೆಸರಲ್ಲಿ NEFT CHALLAN ಮೂಲಕ ಪಾವತಿಸಿ ಮೂಲ ಚಲನ್‌ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಿ ಮೇಲ್ಕಂಡ ಅಂತಿಮ ದಿನಾಂಕದೊಳಗೆ ಮಂಡಳಿಗೆ ಸಲ್ಲಿಸುವುದು. ನಿಗಧಿಪಡಿಸಿರುವ ಅವಧಿ ಮೀರಿ ಬಂದ ಯಾವುದೇ ಅರ್ಜಿಗಳನ್ನು ಮಂಡಳಿ ಪರಿಗಣಿಸುವುದಿಲ್ಲ. ಜೊತೆಗೆ ಮಂಡಳಿಗೆ ಪಾವತಿಸಲಾದ ಮೊಬಲಗನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

ಛಾಯಾಪ್ರತಿ ಮತ್ತು ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಪ್ರತ್ಯೇಕ ನಮೂನೆಗಳಿವೆ. ಆಯಾ ನಮೂನೆಗಳನ್ನು ಆಯಾ ಉದ್ದೇಶಕ್ಕೆ ಮಾತ್ರ ಬಳಸುವುದು.

| **ಶುಲ್ಕದ ವಿವರ** | |
|---|---|
| ಮರುಎಣಿಕೆ(ಲಿಖಿತ/ಪ್ರಾಯೋಗಿಕ ಪರೀಕ್ಷೆಗಳು) | ಒಂದು ವಿಷಯಕ್ಕೆ ರೂ.150.00(ನೂರ ಐವತ್ತು ರೂಗಳು ಮಾತ್ರ) |
| **ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ** | **ರೂ.300/– (ಮೂರು ನೂರು ರೂಪಾಯಿಗಳು)** |
| **ಮರುಮೌಲ್ಯಮಾಪನಕ್ಕೆ ಒಂದು ವಿಷಯಕ್ಕೆ ಶುಲ್ಕ** | **ರೂ.700/– (ಏಳು ನೂರು ರೂಪಾಯಿಗಳು)** |

ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ 300/–ರಂತೆ ಜೆರಾಕ್ಸ್ ಪ್ರತಿ ಪಡೆಯಲು ಬಯಸುವ ಎಲ್ಲಾ ವಿಷಯಗಳಿಗೆ ಶುಲ್ಕವನ್ನು ಪಾವತಿಸಬೇಕಾಗಿರುತ್ತದೆ. ಮರುಮೌಲ್ಯಮಾಪನ ಶುಲ್ಕ ಒಂದು ವಿಷಯಕ್ಕೆ ರೂ.700/–ರಂತೆ ಮರುಮೌಲ್ಯಮಾಪನ ಬಯಸುವ ಎಲ್ಲಾ ವಿಷಯಗಳಿಗೂ ಶುಲ್ಕ ಪಾವತಿಸಬೇಕಾಗಿರುತ್ತದೆ. **ಮಂಡಳಿಯಿಂದ ಉತ್ತರ ಪತ್ರಿಕೆಯ ಛಾಯಾಪ್ರತಿ ಪಡೆಯದೇ ನೇರವಾಗಿ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಮತ್ತು ಪಾವತಿಸಿದ ಹಣವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು. ಅರ್ಜಿಯೊಂದಿಗೆ ಮೂಲ ಚಲನ್ ಪ್ರತಿಯನ್ನು ಲಗತ್ತಿಸುವುದು.**

ಛಾಯಾಪ್ರತಿ ಮತ್ತು ಮರುಮೌಲ್ಯಮಾಪನದ ಅರ್ಜಿಗಳನ್ನು ಸಹಾಯಕ ನಿರ್ದೇಶಕರು, ಸಂಗೀತ ಶಾಖೆ, 4ನೇ ಮಹಡಿ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು ಇವರ ವಿಳಾಸಕ್ಕೆ ನೊಂದಾಯಿತ ಅಂಚೆ ಅಥವಾ ಖುದ್ದಾಗಿ(**ನಿಗಧಿ ಪಡಿಸಿರುವ ಕಾಲಮಿತಿಯೊಳಗೆ**) ಸಲ್ಲಿಸಲು ತಿಳಿಸಿದೆ.

**ವಿ.ಸೂ:–** ಪ್ರಾಯೋಗಿಕ ಪರೀಕ್ಷೆಗೆ ಸಂಬಂಧಿಸಿದಂತೆ ಅಂಕಗಳ ಮರುಎಣಿಕೆ ಮಾಡಲು ಮಾತ್ರ ಅವಕಾಶವಿರುತ್ತದೆ.

**ಫಲಿತಾಂಶ ಪ್ರಕಟಣೆಯಾದ ನಂತರ ಈ ಕೆಳಕಂಡ ಅಂಶಗಳ ಆಧಾರದ ಮೇಲೆ ಆಯಾ ಕೇಂದ್ರಗಳ ಮುಖ್ಯಅಧೀಕ್ಷಕರು/ಮುಖ್ಯಸ್ಥರುಗಳು ಎಲ್ಲಾ ವಿದ್ಯಾರ್ಥಿಗಳ ಫಲಿತಾಂಶವನ್ನು ಕಡ್ಡಾಯವಾಗಿ ಪರಿಶೀಲಿಸಲು ತಿಳಿಸಿದೆ.**

- ಮೇ–2019ರಲ್ಲಿ ಪರೀಕ್ಷೆ ಬರೆದ ಎಲ್ಲಾ ವಿದ್ಯಾರ್ಥಿಗಳ ಫಲಿತಾಂಶ ಬಂದಿದೆಯೇ? ಎಂಬುದನ್ನು ಪರಿಶೀಲಿಸಿಕೊಳ್ಳುವುದು.
- ವಿದ್ಯಾರ್ಥಿಯು ಆಯಾ ಪಠ್ಯವಸ್ತುವಿನಂತೆ ಪರೀಕ್ಷೆ ಬರೆಯದೇ, ಬೇರೆ ಪಠ್ಯವಸ್ತುವಿನಂತೆ ಬರೆದಿರುವ ವಿಷಯದ ಪರೀಕ್ಷೆಯ ಫಲಿತಾಂಶವನ್ನು ಮಂಡಳಿ ಪರಿಗಣಿಸಿಲ್ಲ. ಅಂತಹ ವಿಷಯದ ಫಲಿತಾಂಶವನ್ನು "AB" ಎಂದು ಪ್ರಕಟಿಸಲಾಗಿದೆ.

➢ ಒಂದು ವೇಳೆ ಯಾವುದಾದರೂ ವಿದ್ಯಾರ್ಥಿಗಳ ಫಲಿತಾಂಶ ಬಾರದಿದ್ದಲ್ಲಿ, ಫಲಿತಾಂಶ ತಡೆಹಿಡಿದಿದ್ದಲ್ಲಿ ಫಲಿತಾಂಶ ಪ್ರಕಟಿಸಿದ 15 ದಿನಗಳೊಳಗಾಗಿ ಸಕಾರಣಗಳೊಂದಿಗೆ ಮಂಡಳಿಗೆ ಪತ್ರ ಬರೆದು ಫಲಿತಾಂಶ ಪಡೆದುಕೊಳ್ಳಲು ತಿಳಿಸಿದೆ.

➢ ವಿದ್ಯಾರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮದಿನಾಂಕ ಇತ್ಯಾದಿ ಸಣ್ಣಪುಟ್ಟ ತಿದ್ದುಪಡಿಗಳಿದ್ದಲ್ಲಿ ಪ್ರಸ್ತಾವನೆಯನ್ನು ಪೂರಕ ದಾಖಲೆಗಳೊಂದಿಗೆ ಫಲಿತಾಂಶ ಪ್ರಕಟವಾದ ಹದಿನೈದು ದಿನಗಳೊಳಗಾಗಿ ಮಂಡಳಿಗೆ ಸಲ್ಲಿಸಿ ಸರಿಪಡಿಸಿಕೊಳ್ಳುವುದು.

➢ ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ವಿದ್ಯಾರ್ಥಿಗೆ ಮಂಡಳಿಯಿಂದ ನೀಡುವ ಅಂಕಪಟ್ಟಿಯು ಆಯಾ ವಿದ್ಯಾರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶಗಳೇ ಅಂತಿಮ ಎಂದು ಭಾವಿಸತಕ್ಕದ್ದು.

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಈ ಸುತ್ತೋಲೆಯ ಪ್ರತಿಯನ್ನು ಮತ್ತು ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ಸಕಾಲದಲ್ಲಿ ಆಯಾ ಕೇಂದ್ರಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.

[ವಿ.ಸುಮಂಗಲ] 2/8/19
ನಿರ್ದೇಶಕರು[ಹೆ.ಪ್ರ]
ಇತರೆ ಪರೀಕ್ಷೆಗಳು.

ಗೆ,

**ರಾಜ್ಯದ ಎಲ್ಲಾ ಸಂಗೀತ ಪರೀಕ್ಷಾ ಕೇಂದ್ರಗಳ ಮುಖ್ಯಅಧೀಕ್ಷಕರು/ಶಾಲಾ ಮುಖ್ಯಸ್ಥರುಗಳಿಗೆ ಸೂಕ್ತ ಕ್ರಮಕ್ಕಾಗಿ.**

**ಪ್ರತಿಯನ್ನು:**

1. ಮಾನ್ಯ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರಿಗೆ ವಂದನಾಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸದೆ.
2. ಜಂಟಿ ನಿರ್ದೇಶಕರು ಹಾಗೂ ಪದನಿಮಿತ್ತ ಸಹ ನಿರ್ದೇಶಕರು, ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ಇವರುಗಳಿಗೆ ಮಾಹಿತಿಗಾಗಿ.
3. ರಾಜ್ಯದ ಎಲ್ಲಾ ಜಿಲ್ಲೆಗಳ ಡಯಟ್ ಪ್ರಾಂಶುಪಾಲರುಗಳಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕಾಗಿ.
4. ಕಛೇರಿ ಪ್ರತಿ.